ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
Bangalore Development Authority

ಸಂಖ್ಯೆ : ಬೆಂಅಪ್ರಾ/ನಯೋಸ/PRL-52/2016-17/ ೨೦೩೧ /2017-18.
No.

ದಿನಾಂಕ :
Date : ೨೦/೦೨/೨೦೧೮

# ಕಾರ್ಯಾದೇಶ

ವಿಷಯ: ಬೆಂಗಳೂರು ಉತ್ತರ ತಾಲ್ಲೂಕು, ಯಶವಂತಪುರ ಹೋಬಳಿ, ಕರಿಓಬನಹಳ್ಳಿ ಗ್ರಾಮದ ಸರ್ವೆ ಸಂಖ್ಯೆ 124/1, 124/2, 124/3 ಮತ್ತು 124/4 ರ ಜಮೀನುಗಳ ಒಟ್ಟು ವಿಸ್ತೀರ್ಣ 15 ಎಕರೆ 16 ಗುಂಟೆ (62321.07 ಚ.ಮೀ) ಪ್ರದೇಶಕ್ಕೆ ವಸತಿ ಬಡಾವಣೆ ನಕ್ಷೆ ಅನುಮೋದನೆ ಕೋರಿ **ಶ್ರೀ ಕೆ.ಹೆಚ್. ಮಂಜಪ್ಪ, ಶ್ರೀಮತಿ ಗಂಗಮ್ಮ, ಶ್ರೀ ಎನ್. ಮಂಜುನಾಥ, ಶ್ರೀಮತಿ ಪ್ರಿಯದರ್ಶಿನಿ ರವರ ಪರವಾಗಿ ನೊಂದಾಯಿತ** ಜಿಪಿಏ ದಾರರಾದ **ಶ್ರೀ ಪ್ರಿಯಕೃಷ್ಣ ರವರ ಪರವಾಗಿ ಜಿಪಿಎದಾರರಾದ ಶ್ರೀ ಪ್ರದೀಪ್ ಕೃಷ್ಣಪ್ಪ** ರವರ ಮನವಿಯ ಬಗ್ಗೆ.

ಉಲ್ಲೇಖ:

1. ಅರ್ಜಿದಾರರ ಅರ್ಜಿ ದಿನಾಂಕ 23.02.2017.
2. ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 85/2017, ದಿನಾಂಕ 17.08.2017.
3. ಈ ಕಛೇರಿಯ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/PRL-52/2016-17/230/2017-18, ದಿನಾಂಕ 23.09.2017 ರಂದು ತಾತ್ಕಾಲಿಕ ವಸತಿ ಬಡಾವಣೆ ನಕ್ಷೆ ಅನುಮೋದನೆ ಸಂಬಂಧ ವಿವಿಧ ಶುಲ್ಕಗಳಾದ ₹. 15,89,200/- ಗಳನ್ನು ಪಾವತಿಸುವಂತೆ ತಿಳಿಸಿರುವುದು.
4. ಅರ್ಜಿದಾರರು ದಿನಾಂಕ 09.11.2017 ರಂದು ಕೆನರಾ ಬ್ಯಾಂಕ್ ಚಲನ್ ನಂ. 5627 ರ ಮೂಲಕ ₹. 15,89,200/- ಗಳನ್ನು ಸಂದಾಯ ಮಾಡಿದ್ದು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆರ್ಥಿಕ ವಿಭಾಗದವರು ದಿನಾಂಕ 29.11.2017 ರಂದು ₹. 15,89,200/- ಹಣ ಸಂದಾಯವಾದ ಬಗ್ಗೆ ದೃಢೀಕರಿಸಿರುವುದು.
5. ಈ ಕಛೇರಿಯ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/PRL-52/2016-17/1479/2017-18, ದಿನಾಂಕ 14.11.2017 ರಂದು GST ಶುಲ್ಕ ₹. 2,86,070/- ಗಳನ್ನು ಪಾವತಿಸುವಂತೆ ತಿಳಿಸಿರುವುದು.
6. ಅರ್ಜಿದಾರರು ದಿನಾಂಕ 16.11.2017 ರಂದು ಕೆನರಾ ಬ್ಯಾಂಕ್ ಚಲನ್ ನಂ. 6226 ರ ಮೂಲಕ ₹. 2,86,070/- ಗಳನ್ನು ಸಂದಾಯ ಮಾಡಿದ್ದು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆರ್ಥಿಕ ವಿಭಾಗದವರು ದಿನಾಂಕ 29.11.2017 ರಂದು ₹. 2,86,070/- ಹಣ ಸಂದಾಯವಾದ ಬಗ್ಗೆ ದೃಢೀಕರಿಸಿರುವುದು.

ಈ ಕೆಳಕಂಡ ಷರತ್ತುಗಳನ್ನು ಒಳಪಡಿಸಿ ಬೆಂಗಳೂರು ಉತ್ತರ ತಾಲ್ಲೂಕು, ಯಶವಂತಪುರ ಹೋಬಳಿ, ಕರಿಓಬನಹಳ್ಳಿ ಗ್ರಾಮದ ಸರ್ವೆ ಸಂಖ್ಯೆ 124/1, 124/2, 124/3 ಮತ್ತು 124/4 ರ ಜಮೀನುಗಳ ಒಟ್ಟು ವಿಸ್ತೀರ್ಣ 15 ಎಕರೆ 16 ಗುಂಟೆ (62321.07 ಚ.ಮೀ) ಪ್ರದೇಶಕ್ಕೆ ವಸತಿ ಬಡಾವಣೆ ನಕ್ಷೆಯನ್ನು ಅನುಮೋದಿಸಲು ತೀರ್ಮಾನಿಸಲಾಯಿತು.

ಉಲ್ಲೇಖ [2] ರ ಸಮಿತಿ ಸಭೆಯ ತೀರ್ಮಾನದಂತೆ ವಸತಿ ಬಡಾವಣೆ ನಕ್ಷೆ ಅನುಮೋದನೆ ಸಂಬಂಧ ಅರ್ಜಿದಾರರಿಗೆ ಉಲ್ಲೇಖ [3] ರ ಪತ್ರದಲ್ಲಿ ತಾತ್ಕಾಲಿಕ ವಸತಿ ಬಡಾವಣೆ ನಕ್ಷೆ ಅನುಮೋದಿಸುವ ಸಂಬಂಧ ವಿವಿಧ ಶುಲ್ಕಗಳ ಬಾಬ್ತು ₹. 15,89,200/- [₹. ಹದಿನೈದು ಲಕ್ಷದ ಎಂಭತ್ತೊಂಭತ್ತು ಸಾವಿರದ ಇನ್ನೂರು ಮಾತ್ರ] ಗಳನ್ನು ಪ್ರಾಧಿಕಾರಕ್ಕೆ ಪಾವತಿಸಲು ತಿಳಿಸಲಾಗಿತ್ತು.

ಅರ್ಜಿದಾರರು ದಿನಾಂಕ 09.11.2017 ರಂದು ಉಲ್ಲೇಖ [4] ರಂತೆ ₹. 15,89,200/- [₹. ಹದಿನೈದು ಲಕ್ಷದ ಎಂಭತ್ತೊಂಭತ್ತು ಸಾವಿರದ ಇನ್ನೂರು ಮಾತ್ರ] ಗಳನ್ನು ಕೆನರಾ ಬ್ಯಾಂಕ್ ನ ಚಲನ್ ನಂ. 5627 ರ ಮೂಲಕ ಪ್ರಾಧಿಕಾರಕ್ಕೆ ಪಾವತಿಸಿರುತ್ತಾರೆ. ಪ್ರಾಧಿಕಾರದ ಲೆಕ್ಕ ಶೀರ್ಷಿಕೆಯಲ್ಲಿ ಸಂದಾಯವಾಗಿರುವ ಬಗ್ಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆರ್ಥಿಕ ವಿಭಾಗದವರು ದಿನಾಂಕ 29.11.2017 ರಂದು ದೃಢೀಕರಿಸಿರುತ್ತಾರೆ.

ಉಲ್ಲೇಖ [5] ರಂತೆ GST ಶುಲ್ಕಗಳ ಬಾಬ್ತು ₹. 2,86,070/- [₹. ಎರಡು ಲಕ್ಷದ ಎಂಭತ್ತಾರು ಸಾವಿರದ ಎಪ್ಪತ್ತು ಮಾತ್ರ] ಗಳನ್ನು ಪ್ರಾಧಿಕಾರಕ್ಕೆ ಪಾವತಿಸಲು ತಿಳಿಸಲಾಗಿತ್ತು.

ಅರ್ಜಿದಾರರು ದಿನಾಂಕ 01.12.2017 ರಂದು ಉಲ್ಲೇಖ [6] ರಂತೆ ₹. 2,86,070/- [₹. ಎರಡು ಲಕ್ಷದ ಎಂಭತ್ತಾರು ಸಾವಿರದ ಎಪ್ಪತ್ತು ಮಾತ್ರ] ಗಳನ್ನು ಕೆನರಾ ಬ್ಯಾಂಕ್ ನ ಚಲನ್ ನಂ. 6226 ರ ಮೂಲಕ ಪ್ರಾಧಿಕಾರಕ್ಕೆ ಪಾವತಿಸಿರುತ್ತಾರೆ. ಪ್ರಾಧಿಕಾರದ ಲೆಕ್ಕ ಶೀರ್ಷಿಕೆಯಲ್ಲಿ ಸಂದಾಯವಾಗಿರುವ ಬಗ್ಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆರ್ಥಿಕ ವಿಭಾಗದವರು ದಿನಾಂಕ 29.11.2017 ರಂದು ದೃಢೀಕರಿಸಿರುತ್ತಾರೆ.

ಉಲ್ಲೇಖ [7] ರಂತೆ ತಾತ್ಕಾಲಿಕ ಕರಡು ವಸತಿ ಬಡಾವಣೆ ನಕ್ಷೆಯಲ್ಲಿನ ಉದ್ಯಾನವನ / ಬಯಲುಜಾಗ, ಸಿ.ಎ., ಜಾಗ, ರಸ್ತೆ ಪ್ರದೇಶ ಮತ್ತು ರಸ್ತೆ ವಿಸ್ತರಣಾ ಪ್ರದೇಶಗಳನ್ನು ನೋಂದಾಯಿತ ಪರಿತ್ಯಜನಾ ಪತ್ರದ ಮೂಲಕ ಕಾರ್ಯಪಾಲಕ ಅಭಿಯಂತರರು [ಪಶ್ಚಿಮ ವಿಭಾಗ], ವಿಜಯನಗರ ವಾಣಿಜ್ಯ ಸಂಕೀರ್ಣ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಇವರಿಗೆ ಹಸ್ತಾಂತರಿಸಿಕೊಳ್ಳುವಂತೆ ತಿಳಿಸಲಾಗಿತ್ತು.

| | |
|---|---|
| 1 | ತಾತ್ಕಾಲಿಕ ಅನುಮೋದಿತ ವಸತಿ ಬಡಾವಣೆ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು, ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆಯನ್ನು ಮಾಡುವಂತಿಲ್ಲ. |
| 2 | ಬಡಾವಣೆಯಲ್ಲಿನ ಪ್ರತಿ ನಿವೇಶನಕ್ಕೂ ಕುಡಿಯುವ ನೀರು, ತ್ಯಾಜ್ಯ ನೀರು ವಿಲೇವಾರಿ, ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸತಕ್ಕದ್ದು ಹಾಗೂ ಉದ್ದೇಶಿತ ವಸತಿ ವಿನ್ಯಾಸದಲ್ಲಿ ಅರ್ಜಿದಾರರು ಕಡ್ಡಾಯವಾಗಿ ಮಳೆನೀರು ಕೊಯ್ಲಿಗೆ ಸಂಬಂಧಿಸಿದಂತೆ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ಉದ್ದೇಶಿತ ಒಟ್ಟು ಕ್ಷೇತ್ರದಲ್ಲಿ ಬೀಳುವ ಮಳೆ ನೀರು ವ್ಯರ್ಥವಾಗಿ ಹೊರಗೆ ಹೋಗದಂತೆ ಉದ್ದೇಶಿತ ಜಮೀನಿನಲ್ಲಿಯೇ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ಧಪಡಿಸಿ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ತೋರಿಸತಕ್ಕದ್ದು. |
| 3 | ತಾತ್ಕಾಲಿಕ ವಸತಿ ಬಡಾವಣೆ ನಕ್ಷೆಯಲ್ಲಿ ತೋರಿಸಿರುವ ರಸ್ತೆ ಅಗಲಗಳನ್ನು ಯಾವುದೇ ಕಾರಣಕ್ಕೂ ಕಡಿಮೆ ಮಾಡಬಾರದು. |
| 4 | ಅರ್ಜಿದಾರರು ಉದ್ದೇಶಿರುವ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಥವಾ ಅನ್ಯ ಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಅನುಮೋದಿತ ಅಭಿವೃದ್ಧಿ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ. |
| 5 | ತಾತ್ಕಾಲಿಕ ವಸತಿ ಬಡಾವಣೆ ನಕ್ಷೆ ಅನುಮೋದನೆ ಸಂಬಂಧ ಜಮೀನಿನ ಮಾಲೀಕತ್ವದ ಬಗ್ಗೆ ಅರ್ಜಿದಾರರು ತಪ್ಪು ಮಾಹಿತಿ / ದಾಖಲಾತಿ ನೀಡಿದ್ದಲ್ಲಿ ಬಡಾವಣೆ ನಕ್ಷೆಯ ಅನುಮೋದನೆಯು ತನ್ನಿಂತಾನೇ ರದ್ದಾಗುತ್ತದೆ. |
| 6 | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಮುಂದೆ ಸೂಚಿಸಬಹುದಾದ ಎಲ್ಲಾ ತಾಂತ್ರಿಕ ವಿಷಯಗಳಿಗೆ ಹಾಗೂ ಶುಲ್ಕಗಳನ್ನು ತುಂಬುವುದರ ನಿರ್ಣಯಕ್ಕೆ ಅರ್ಜಿದಾರರು ಬದ್ಧರಾಗಿರುವುದು. |
| 7 | ಪ್ರಸ್ತಾಪಿತ ವಿನ್ಯಾಸದಲ್ಲಿ ಘನತ್ಯಾಜ್ಯಗಳನ್ನು ಹಸಿತ್ಯಾಜ್ಯ, ಒಣತ್ಯಾಜ್ಯ, ಪ್ಲಾಸ್ಟಿಕ್ ಮತ್ತು ಇತ್ಯಾದಿ ವಿಂಗಡಿಸಿ. Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು. |
| 8 | ವಸತಿ ವಿನ್ಯಾಸದಲ್ಲಿ ಎಲ್ಲಾ ರಸ್ತೆಗಳನ್ನು IRC Specification ಪ್ರಕಾರ ಅಭಿವೃದ್ಧಿಪಡಿಸತಕ್ಕದ್ದು, ಅದಕ್ಕೂ ಮುಂಚೆ ಅಂದಾಜು ಪಟ್ಟಿಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಭಿಯಂತರ ವಿಭಾಗದಿಂದ ಅನುಮೋದಿಸಿಕೊಳ್ಳತಕ್ಕದ್ದು, ರಸ್ತೆ ಅಭಿವೃದ್ಧಿ ಪಡಿಸುವ ಸಮಯದಲ್ಲಿ ಅಭಿಯಂತರ ವಿಭಾಗದಿಂದ ಸ್ಥಳ ಪರಿಶೀಲನೆಗಾಗಿ ಮತ್ತು ಕಾಮಗಾರಿ ಪರಿಶೀಲನೆಗೆ ಅನುವುಮಾಡಿಕೊಡತಕ್ಕದ್ದು. |
| 9 | ನಿವೇಶನಗಳನ್ನು ಯಾವ ಉದ್ದೇಶಕ್ಕಾಗಿ ಕಾಯ್ದಿರಿಸಿದೆಯೋ ಆ ಉದ್ದೇಶದಿಂದ ಬೇರೆ ಉದ್ದೇಶಕ್ಕೆ ಯಾವುದೇ ಕಾರಣದಿಂದಲೂ ಬದಲಾಯಿಸಬಾರದು. |
| 10 | ಅಂತಿಮ ವಸತಿ ಬಡಾವಣೆ ನಕ್ಷೆಗೆ ಅನುಮೋದನೆ ಪಡೆದ ನಂತರವೇ ನಿವೇಶನಗಳಲ್ಲಿ ಕಟ್ಟಡ ನಿರ್ಮಾಣ ಮಾಡುವ ಸಂಬಂಧ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯತಕ್ಕದ್ದು. |

000305

| | |
|---|---|
| 19 | ದಿನಾಂಕ 07/01/2011 ರಂದು ಜರುಗಿದ ಸಮಿತಿ ಸಭೆಯ ವಿಷಯ ಸಂಖ್ಯೆ 09/2011 ರ ರೀತ್ಯಾ ವಸತಿ ನಿವೇಶನಗಳನ್ನು ಬಿಡುಗಡೆ ಮಾಡಿಸಿಕೊಳ್ಳುವ ಮೊದಲು ನಿಯಮಾವಳಿ ಪ್ರಕಾರ BESCOM ಮತ್ತು BWSSB ಗಳಿಂದ ನಿರಾಕ್ಷೇಪಣಾ ಪತ್ರ ಪಡೆದು ಸಲ್ಲಿಸತಕ್ಕದ್ದು. |
| 20 | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ವಿಧಿಸುವ ಇತರೆ ಷರತ್ತುಗಳಿಗೆ ಬದ್ಧರಾಗಿರುವುದು. |

19/02

ಆಯುಕ್ತರು,

ಬೆಂಅಪ್ರಾ, ಬೆಂಗಳೂರು

17/02/18

ಇವರಿಗೆ,

ಶ್ರೀ ಪ್ರದೀಪ್ ಕೃಷ್ಣಪ್ಪ,
ಬಿನ್ ಎಂ. ಕೃಷ್ಣಪ್ಪ, ಜಿಪಿಎ ದಾರರು,
# 2937/38ಇ, ಸರ್ವಿಸ್ ರಸ್ತೆ,
ವಿಜಯನಗರ
ಬೆಂಗಳೂರು 560 040.